## ಕರ್ನಾಟಕ ಸರ್ಕಾರ

ಸಂಖ್ಯೆ :ಸಂವ್ಯಶಾಇ 17 ಶಾಸನ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ : 06.04.2021

### ಅಧಿಸೂಚನೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2021ಇದಕ್ಕೆ 2021 ರ ಏಪ್ರಿಲ್ ತಿಂಗಳ 5ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ:19 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು ಭಾರತ ಸಂವಿಧಾನದ 348ನೇ ಅನುಚ್ಛೇದದ ಖಂಡ (3)ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಸದರಿ ಅಧಿನಿಯಮದ ಆಂಗ್ಲ ಭಾಷಾಂತರವನ್ನು ರಾಜ್ಯಪತ್ರದಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**xx** **xx** **xx**

(**XX** ಲಗತ್ತಿಸಲಾದ ವಿಷಯವನ್ನು ಇಲ್ಲಿ ಸೇರಿಸತಕ್ಕದ್ದು)

1. ಕರ್ನಾಟಕ ರಾಜ್ಯಪತ್ರದ ಸಂಕಲನಕಾರರು, ಬೆಂಗಳೂರು, ಇವರಿಗೆ **ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ದಿನಾಂಕ:06.04.2021** ರಂದು ಪ್ರಕಟಿಸಬೇಕೆಂದು ಕೋರಿದೆ .
2. ನಿರ್ದೇಶಕರು, ಭಾಷಾಂತರ ನಿರ್ದೇಶನಾಲಯ, ವಿ.ವಿ.ಗೋಪುರ ಬೆಂಗಳೂರು.

**ಪ್ರತಿಗಳು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು ಪ್ರಸ್ತಾವಿತ ಅಧಿನಿಯಮದ ಪ್ರತಿಗಳನ್ನು ನೇರವಾಗಿ https://erajyapatra.karnataka.gov.in/ ಪಡೆದುಕೊಳ್ಳುವಂತೆ ಕೋರಲಾಗಿದೆ.
2. ಮಾನ್ಯ ರಾಜ್ಯಪಾಲರ ಕಾರ್ಯದರ್ಶಿ, ರಾಜಭವನ ಬೆಂಗಳೂರು (ಮೇಲ್ಪತ್ರದೊಂದಿಗೆ).
3. ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು (ಮೇಲ್ಪತ್ರದೊಂದಿಗೆ).
4. ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಆಪ್ತ ಕಾರ್ಯದರ್ಶಿ.
5. ಸಚಿವ ಸಂಪುಟ ಶಾಖೆ.(ಸಿ: 107 /2021)
6. ಪ್ರಕಟಣಾ ಶಾಖೆ:ಕ್ರೋಡೀಕರಣ ಶಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
7. ಬಿಡಿ ಪ್ರತಿಗಳು.

O/o ACS, FD
No: ..........
Dt: ..........

## 2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 19

(2021ರ ಏಪ್ರಿಲ್ ತಿಂಗಳ 6ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021

(2021 ರ ಏಪ್ರಿಲ್ ತಿಂಗಳ 5ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತದ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು, ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 4ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ ಸಂಖ್ಯೆ:29) 4ನೇ ಪ್ರಕರಣದ (ಇಇಇ)ನೇ ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಇ4) ಸಂಗ್ರಹಣಾ ಸಂಸ್ಥೆಯು, ಕರ್ನಾಟಕ ಗ್ರಾಮೀಣ ಮೂಲಭೂತಸೌಕರ್ಯ ಅಭಿವೃದ್ಧಿ ನಿಯಮಿತವು ಕಾಮಗಾರಿಗಳನ್ನು ಸ್ವಯಂ ಕಾರ್ಯಗತಗೊಳಿಸುವ ಷರತ್ತಿಗೆ ಒಳಪಟ್ಟು , ಎರಡು ಕೋಟಿ ರೂಪಾಯಿಗಳಿಗೆ ಮೀರದಿರುವ ಮೌಲ್ಯದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಎಲ್ಲಾ ವಿಧದ ನಿರ್ಮಾಣ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ವಹಿಸಿಕೊಟ್ಟಲ್ಲಿ:

ಪರಂತು, ಉಪ-ಗುತ್ತಿಗೆಯು ಅವಶ್ಯಕವಾದ ಸಂದರ್ಭದಲ್ಲಿ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿ ಟೆಂಡರಿನ ಮೂಲಕ ಮಾಡತಕ್ಕದ್ದು:

ಮತ್ತು ಪರಂತು, ಟೆಂಡರಿನ ಮೂಲಕ ನಿರ್ಮಾಣ ಕಾಮಗಾರಿಗಳನ್ನು ಉಪ-ಗುತ್ತಿಗೆ ನೀಡುವಾಗ ಈ ಅಧಿನಿಯಮದ 6ನೇ ಪ್ರಕರಣದ ಪರಂತುಕಗಳ ಅನುಸಾರವಾಗಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗಾಗಿ ಮೀಸಲಿರಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.